# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

## ಮುಕ್ತಗಂಗೋತ್ರಿ, ಮೈಸೂರು–570006

## ಹಿರಿಯ ವಿದ್ಯಾರ್ಥಿಗಳ ಸಂಘ

---

ಸಂಖ್ಯೆ:ಕರಾಮುವಿ/ಹಿವಿಸಂ/06/2022–23 ದಿನಾಂಕ: 15.09.2022

**ಹಿರಿಯ ವಿದ್ಯಾರ್ಥಿಗಳ ಸರ್ವಸದಸ್ಯರ ಪ್ರಥಮ ಸಭೆಗೆ ಆಹ್ವಾನ.**

**ವಿಷಯ:** ಕರಾಮುವಿಯ ಹಿರಿಯ ವಿದ್ಯಾರ್ಥಿಗಳ ಸಂಘದ ಸರ್ವ ಸದಸ್ಯರ ಪ್ರಥಮ ಸಭೆಯನ್ನು ಕುರಿತು.

**ಪ್ರೀತಿಯ ಹಿರಿಯ ವಿದ್ಯಾರ್ಥಿಗಳೇ,**

1996ರಲ್ಲಿ ಸ್ಥಾಪನೆಯಾದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಇದೀಗ 25ನೇ ವರ್ಷದ ಬೆಳ್ಳಿ ಹಬ್ಬವನ್ನು ಆಚರಿಸಿಕೊಂಡಿದೆ. ಇದುವರೆಗೂ ಲಕ್ಷಾಂತರ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಅವಕಾಶ ಕಲ್ಪಿಸಿರುವ ವಿಶ್ವವಿದ್ಯಾನಿಲಯದಲ್ಲಿ ಈಗ ಹಿರಿಯ ವಿದ್ಯಾರ್ಥಿಗಳ ಸಂಘವು ಸ್ಥಾಪನೆಗೊಂಡಿದ್ದು, ಹಿರಿಯ ವಿದ್ಯಾರ್ಥಿಗಳಾದ ತಾವು ಇದರ ಸದಸ್ಯರಾಗಿರುತ್ತೀರಿ. ವಿಶ್ವವಿದ್ಯಾನಿಲಯದ ವಿವಿಧ ಶೈಕ್ಷಣಿಕ ಚಟುವಟಿಕೆಗಳು ಮತ್ತು ಸರ್ವತೋಮುಖ ಬೆಳವಣಿಗೆಯಲ್ಲಿ ಹಿರಿಯ ವಿದ್ಯಾರ್ಥಿಗಳ ಸಂಘವು ಸಹ ಭಾಗಿಯಾಗಬೇಕಾಗಿರುವುದರಿಂದ ಈ ಸಂಬಂಧದ ಕಾರ್ಯ ಸೂಚಿಗಳನ್ನು ಕುರಿತು ಚರ್ಚಿಸುವುದು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ **ದಿನಾಂಕ:23.09.2022** ರಂದು ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಬೆಳಗ್ಗೆ 11:00 ಗಂಟೆಗೆ ಹಿರಿಯ ವಿದ್ಯಾರ್ಥಿಗಳ ಸಂಘದ ಸರ್ವ ಸದಸ್ಯರ ಸಾಮಾನ್ಯ ಸಭೆಯನ್ನು ಏರ್ಪಡಿಸಲಾಗಿದೆ. ತಾವು ಈ ಸಭೆಯಲ್ಲಿ ಪಾಲ್ಗೊಳ್ಳಬೇಕೆಂದು ಈ ಮೂಲಕ ಆಹ್ವಾನಿಸಲಾಗಿದೆ.

ಕಾರ್ಯದರ್ಶಿಗಳು